ದಿನಾಂಕಃ 08-05-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**<u>ಪಾಟೀ ಸವಾಲುಃ</u>** ದೂರುದಾರರ ಪರ ವಕೀಲರಿಂದ,

1) ನಿಪಿ-1 ಚೆಕ್ಕಿನಲ್ಲಿ ಕಂಡು ಬರುವ ಸಹಿ ನನ್ನದಾಗಿರುವುದಿಲ್ಲ. ನಿಪಿ-1 ಚೆಕ್ಕಿನಲ್ಲಿರುವ ಸಹಿ ನನ್ನದೇ ಆಗಿದ್ದರೂ ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದೂರುದಾರರು ನನಗೆ ಪರಿಚಯ ಇರುತ್ತಾರೆ ಎಂದರೆ ಸರಿಯಲ್ಲ. ದೂರುದಾರರು ನನ್ನ ಗಂಡನಿಗೆ ಪರಿಚಯ ಇರುತ್ತಾರೆ ಎಂದರೆ ಸರಿಯಲ್ಲ. ದೂರುದಾರರು ಮತ್ತು ನಾವು ಹಬ್ಬ ಹರಿದಿನಗಳನ್ನು ಒಟ್ಟಿಗೆ ಆಚರಿಸುತ್ತಿದ್ದೆವು ಎಂದರೆ ಸರಿಯಲ್ಲ. ನಾನು ದಿಃ 09-09-2022 ರಂದು ದೂರುದಾರರಿಂದ ರೂ. ಒಂದು ಲಕ್ಷ ಹಣವನ್ನು ಸಾಲವಾಗಿ ಪಡೆದಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಸಾಲದ ಭದ್ರತೆಗಾಗಿ ನಿಪಿ-1 ಚೆಕ್ಕನ್ನು ದೂರುದಾರರಿಗೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಪಡೆದಿರುವ ಸಾಲವನ್ನು ಮೂರು ತಿಂಗಳ ನಂತರ ಪಾವತಿ ಮಾಡುತ್ತೇನೆ ಎಂದು ಹೇಳಿ ನಿಪಿ-1 ಚೆಕ್ಕು ನೀಡಿರುತ್ತೇನೆ ಎಂದರೆ ಸರಿಯಲ್ಲ.

2) ನಾನು ಕಿತ್ತೂರು ಗುರುವಯ್ಯನಕೊಪ್ಪಲಿನಲ್ಲಿ ವಾಸವಾಗಿರುತ್ತೇನೆ. ದಿಃ 27-03-2023 ರಂದು ದೂರುದಾರರು ಚೆಕ್ ಅಮಾನ್ಯಗೊಂಡ ಬಗ್ಗೆ ತಿಳುವಳಿಕೆ ಪತ್ರ ಕಳುಹಿಸಿದ್ದರು ಎಂದರೆ ನನಗೆ ಗೊತ್ತಿಲ್ಲ, ಆಗ ನಾನು ಮೈಸೂರಿನಲ್ಲಿ ಇದ್ದೆ ಎಂದು ನುಡಿಯುತ್ತಾರೆ. ತಿಳುವಳಿಕೆ ಪತ್ರ ನೀಡಿದ ಕಾಲಕ್ಕೆ ನಾನು ಮೈಸೂರಿನಲ್ಲಿ ನನ್ನ ತಮ್ಮನ ಮನೆಯಲ್ಲಿ ಇದ್ದೆ. ನಿಪಿ 1 ಚೆಕ್ ದುರುಪಯೋಗಪಡಿಸಿಕೊಂಡ ಬಗ್ಗೆ ನಾನು ಪೋಲೀಸ್ ದೂರು ದಾಖಲು ಮಾಡಿರುವುದಿಲ್ಲ. ನನ್ನ ಗಂಡ ದೂರುದಾರರಿಂದ 15 ಸಾವಿರ ಸಾಲ ಪಡೆದುಕೊಂಡಿದ್ದರು ಎಂದರೆ ಸರಿಯಲ್ಲ. ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರಧನ್ಯಾದಂ., ಕೆ.ಆರ್.ನಗರ